# ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ: ಕೇಂದ್ರ ಕಛೇರಿ: ಕಲಬುರಗಿ

ಸಂ.ಕಕರಸಾ:ಕೇಕ:ಸಂ:ಪಾಸ್: 576 :21-22 ದಿನಾಂಕ:13.07.2021.

## ಸುತ್ತೋಲೆ

**ವಿಷಯ:** ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಪರೀಕ್ಷೆಗಳು ನಡೆಯುವ ಅವಧಿಯಲ್ಲಿ ಪರೀಕ್ಷಾ ಪ್ರವೇಶ ಪತ್ರದೊಂದಿಗೆ ಪರೀಕ್ಷಾ ಕೇಂದ್ರಗಳವರೆಗೆ ನಿಗಮದ ಬಸ್‌ಗಳಲ್ಲಿ ಪ್ರಯಾಣಿಸಲು ಅನುಮತಿಸುವ ಬಗ್ಗೆ.

**ಉಲ್ಲೇಖ:**ಸಂ:ಕರಾಸಾ:ಕೇಕ:ಸಂ:ವಾ:ಸಿ2:408:21-22 ದಿನಾಂಕ:13.07.2021.

@@@@@

2020-21 ನೇ ಸಾಲಿನ ಕರ್ನಾಟಕದ ಎಸ್.ಎಸ್.ಎಲ್.ಸಿ ಅಂತಿಮ ಪರೀಕ್ಷೆಗಳನ್ನು ಸರ್ಕಾರದ ಆದೇಶದಂತೆ ದಿನಾಂಕ:19.7.2021 ಮತ್ತು 22.07.2021 ರಂದು ನಡೆಸಲು ತೀರ್ಮಾನಿಸಿದ್ದು, ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಪರೀಕ್ಷೆಗಳು ನಡೆಯುವ ಅವಧಿಯಲ್ಲಿ ಪರೀಕ್ಷಾ ಪ್ರವೇಶ ಪತ್ರದೊಂದಿಗೆ ಪರೀಕ್ಷಾ ಕೇಂದ್ರಗಳವರೆಗೆ ನಿಗಮದ ಬಸ್‌ಗಳಲ್ಲಿ ಉಚಿತವಾಗಿ ಪ್ರಯಾಣಿಸಲು ಅನುಮತಿಸುವಂತೆ ಕೋರಲಾಗಿರುತ್ತದೆ.

ಅದರನ್ವಯ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಕ.ಕ.ರ.ಸಾ ನಿಗಮವು ಎಸ್.ಎಸ್.ಎಲ್.ಸಿ ಪರೀಕ್ಷೆ ನಡೆಯುವ ದಿನಾಂಕಗಳಲ್ಲಿ ಅಂದರೆ ದಿನಾಂಕ:19.07.2021 ಮತ್ತು 22.07.2021 ರಂದು ಪರೀಕ್ಷೆಗೆ ಹಾಜರಾಗುವ ರಾಜ್ಯದ ಎಲ್ಲಾ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳು ತಮ್ಮ ವಾಸಸ್ಥಳದಿಂದ ನಿಯೋಜಿತ ಪರೀಕ್ಷಾ ಕೇಂದ್ರದವರೆಗೆ ಹೋಗುವಾಗ ಮತ್ತು ಹಿಂದಿರುಗುವಾಗ **"ಎಸ್.ಎಸ್.ಎಲ್.ಸಿ ಪರೀಕ್ಷಾ ಪ್ರವೇಶ ಪತ್ರವನ್ನು"** ತೋರಿಸಿ ನಿಗಮದ ನಗರ, ಹೊರವಲಯ, ಸಾಮಾನ್ಯ ಹಾಗೂ ವೇಗದೂತ ಬಸ್‌ಗಳಲ್ಲಿ ಉಚಿತವಾಗಿ ಪ್ರಯಾಣಿಸಲು ಅವಕಾಶ ಕಲ್ಪಿಸಲಾಗಿದೆ.

ಈ ಸಂಬಂಧ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಪರೀಕ್ಷಾ ಅವಧಿಯಲ್ಲಿ ನಿಯೋಜಿತ ಪರೀಕ್ಷಾ ಕೇಂದ್ರಗಳಿಗೆ ತೆರಳಲು ಹಾಗೂ ವಾಸಸ್ಥಳಕ್ಕೆ ಮರಳಲು ಪರೀಕ್ಷಾ ಪ್ರವೇಶ ಪತ್ರದೊಂದಿಗೆ ಉಚಿತ ಪ್ರಯಾಣವನ್ನು ಅನುಮತಿಸಲು ನಿಗಮದ ಎಲ್ಲಾ ಚಾಲಕ/ನಿರ್ವಾಹಕರುಗಳಿಗೆ ಸೂಕ್ತ ತಿಳುವಳಿಕೆ ನೀಡಲು ಸೂಚಿಸಲಾಗಿದೆ. ಮುಂದುವರೆದು ಪ್ರವೇಶ ಪತ್ರದ ಆಧಾರದ ಮೇಲೆ ಬಸ್ಸು ಆಚರಣೆ ಮಾರ್ಗದಲ್ಲಿ ಪರೀಕ್ಷಾ ಕೇಂದ್ರಗಳಿಗೆ ತೆರಳಲು ವಿದ್ಯಾರ್ಥಿಗಳು ಬಸ್ಸನ್ನು ಹತ್ತುವವರಿದ್ದಲ್ಲಿ ಹಾಗೂ ಆಚರಣಾ ಮಾರ್ಗದಲ್ಲಿ ಪರೀಕ್ಷಾ ಕೇಂದ್ರಗಳಿದ್ದಲ್ಲಿ, ವಿದ್ಯಾರ್ಥಿಗಳು ಬಸ್ಸನ್ನು ಹತ್ತಲು/ಇಳಿಯಲು ಅನುಕೂಲವಾಗುವಂತೆ ಕೋರಿಕೆ ನಿಲುಗಡೆ ನೀಡಲು ಕ್ರಮ ಕೈಗೊಳ್ಳುವುದು.

ಚಾಲನಾ ಸಿಬ್ಬಂದಿಗಳು ಮೇಲ್ಕಂಡ ನಿರ್ದೇಶನಗಳನ್ನು ತಪ್ಪದೇ ಪಾಲಿಸುವುದು.

ಈ ಸುತ್ತೋಲೆಯನ್ನು ಎಲ್ಲಾ ಘಟಕ ಹಾಗೂ ಬಸ್ ನಿಲ್ದಾಣಗಳ ಸೂಚನಾ ಫಲಕಗಳಲ್ಲಿ ಪ್ರದರ್ಶಿಸಿ ಮೇಲ್ಕಂಡ ನಿರ್ದೇಶನಗಳನ್ನು ಜಾರಿಗೊಳಿಸಲು ಕ್ರಮವಹಿಸುವುದು.

ವ್ಯವಸ್ಥಾಪಕ ನಿರ್ದೇಶಕರು

**ಪ್ರತಿಯನ್ನು:** ಹಿರಿಯ/ವಿಭಾಗೀಯ ನಿಯಂತ್ರಣಾಧಿಕಾರಿಗಳು, ಈ.ಕ.ರ.ಸಾ.ಸಂಸ್ಥೆ, ಕಲಬುರಗಿ ವಿಭಾಗ-1/ ವಿಭಾಗ-2/ಬೀದರ/ಯಾದಗಿರ/ರಾಯಚೂರು/ಕೊಪ್ಪಳ/ಬಳ್ಳಾರಿ/ಹೊಸಪೇಟೆ/ವಿಜಯಪುರ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ.

**ಪ್ರತಿಯನ್ನು:** ಎಲ್ಲಾ ಇಲಾಖಾ ಮುಖ್ಯಸ್ಥರು, ಈ.ಕ.ರ.ಸಾ.ಸಂಸ್ಥೆ, ಕೇಂದ್ರ ಕಛೇರಿ, ಕಲಬುರಗಿ ರವರ ಮಾಹಿತಿಗಾಗಿ ಕಳುಹಿಸಲಾಗಿದೆ.

**ಪ್ರತಿಯನ್ನು:** ಉಪ ಮುಖ್ಯ ಸಂಚಾರ ವ್ಯವಸ್ಥಾಪಕರು (ಕೇತದ), ಈ.ಕ.ರ.ಸಾ.ಸಂಸ್ಥೆ ಕೇಂದ್ರ ಕಛೇರಿ ಕಲಬುರಗಿ ರವರ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ.



Scanned with CamScanner